# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 422 |
| ಸದಸ್ಯರ ಹೆಸರು | : | ಡಾ:ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 10.07.2023 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ಜಿಲ್ಲೆಯಲ್ಲಿರುವ ಸುಮಾರು 1500 ಶಾಲಾ ಕೊಠಡಿಗಳು ಶಿಥಿಲಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಮಳೆಗಾಲದಲ್ಲಿ ಮಕ್ಕಳು ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಭಯದಲ್ಲಿ ಕುಳಿತುಕೊಂಡು ಅಧ್ಯಯನ ಮಾಡುವುದು ಸೂಕ್ತವೇ; | ಈ ಕುರಿತು ಜಿಲ್ಲೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಹಾಗೂ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಮುಖ್ಯಸ್ಥರಿಗೆ ಶಿಥಿಲಗೊಂಡ ಕೊಠಡಿಗಳಲ್ಲಿ ಪಾಠ ಬೋಧನೆಗಳು ನಡೆಯದಂತೆ ಕ್ರಮವಹಿಸಲು ತಿಳಿಸಲಾಗಿದೆ ಮತ್ತು ಮುನ್ನೆಚ್ಚರಿಕೆ ಕ್ರಮಗಳು ತೆಗೆದುಕೊಳ್ಳಲಾಗಿದೆ. |
| ಇ) | ಹಲವಾರು ಶಾಲೆಗಳ ಕೊಠಡಿ ನಿರ್ಮಾಣದಲ್ಲಿ ಕಳಪೆ ಕಾಮಗಾರಿಯ ಕಾರಣದಿಂದ ಶಿಥಿಲಗೊಂಡಿದ್ದು, ಇಲ್ಲಿ ಮಕ್ಕಳು ಶಿಕ್ಷಣ ಪಡೆಯುತ್ತಿದ್ದು, ಇದಕ್ಕೆ ಪರಿಹಾರವೇನು; | 2022–23ನೇ ಸಾಲಿನಲ್ಲಿ ವಿವೇಕ ಯೋಜನೆಯಡಿಯಲ್ಲಿ 291 ಕೊಠಡಿಗಳು ಮತ್ತು ಕೆ.ಕೆ.ಆರ್.ಡಿ.ಬಿ ಯೋಜನೆಯಡಿಯಲ್ಲಿ 96 ಕೊಠಡಿಗಳನ್ನು ನಿರ್ಮಾಣ ಮಾಡಲಾಗುತ್ತಿದೆ.<br>ಕಳಪೆ ಕಾಮಗಾರಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. |
| ಈ) | ಕಳಪೆ ಕಾಮಗಾರಿ ಕುರಿತು ಸೂಕ್ತ ಕ್ರಮ ಕೈಗೊಂಡು ಹೊಸದಾಗಿ ಕೊಠಡಿಗಳನ್ನು ಗುಣಮಟ್ಟದ ಕಾಮಗಾರಿಯೊಂದಿಗೆ ಪೂರೈಕೆ ಮಾಡಿ ಹಿಂದುಳಿದ ಭಾಗದ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ? | ಮೇಲ್ಕಂಡ ಪ್ರಶ್ನೆ(ಇ) ಉತ್ತರದಿಂದಾಗಿ ಸದರಿ ಪ್ರಶ್ನೆ ಉದ್ಭವಿಸುವುದಿಲ್ಲ. |

ಇಪಿ: 107 ಯೋಸಕ 2023

(ಎಸ್.ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು